ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ : ಸಿ5(2)ಪ.ಸ.ಬಡ್ತಿ-01/2012-13 ದಿನಾಂಕ : 30-01-2014

**ಅಧಿಸೂಚನೆ**

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಾಯಕ ನಿರ್ದೇಶಕರು / ಪತ್ರಾಂಕಿತ ವ್ಯವಸ್ಥಾಪಕರುಗಳಿಗೆ ಪತ್ರಾಂಕಿತ ಸಹಾಯಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪ್ಯೆ 2008 ದಿ : 06-01-2009.

3 :- ದಿನಾಂಕ : 17-08-2013 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4: ಈ ಕಛೇರಿಯ ಅಧಿಸೂಚನೆ ಸಂಖ್ಯೆ : ಸಿ5(2)ಪ.ಸ.ಬಡ್ತಿ-01/2012-13 ದಿನಾಂಕ: 08-10-2013

45:- ದಿನಾಂಕ: 30-01-2014 ರಂದು ನಡೆದ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಅರ್ಹ ಅಧಿಕಾರಿಗಳು ಭಾಗವಹಿಸಿ, ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ.

* * * * * *

ಪ್ರಸ್ತಾವನೆ :

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ಸಹಾಯಕರ ವೃಂದದ ಹುದ್ದೆಗೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ಸಹಾಯಕರ ಹುದ್ದೆಯಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರ / ಸಹಾಯಕ ನಿರ್ದೇಶಕರು(ಬೋಧಕೇತರ) ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 17-08-2013 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು. ಸದರಿ ಸಭೆಯಲ್ಲಿ ದಿನಾಂಕ : 31-12-2013 ರ ಅಂತ್ಯಕ್ಕೆ ಖಾಲಿ ಆಗುವ 06 ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಲು ನಿರ್ಧರಿಸಲಾಯಿತು.

ಬಡ್ತಿಗಾಗಿ ಅರ್ಹರಿರುವ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋಧಕೇತರ) ಗಳಿಗೆ ದಿನಾಂಕ : 30-09-2013 ರಂದು ಖಾಲಿ ಇದ್ದ ಹುದ್ದೆಗಳಿಗೆ ಸ್ಥಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗಿ, ಸದರಿ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಅವರುಗಳು ಸ್ವತ: ಸ್ಥಳಗಳನ್ನು ಆಯ್ಕೆ ಮಾಡಿಕೊಂಡ ಸ್ಥಳಗಳಿಗೆ ಉಲ್ಲೇಖಿತ (4) ರಲ್ಲಿನ ದಿನಾಂಕ : 08-10-2013 ರ ಈ ಕಛೇರಿಯ ಅಧಿಸೂಚನೆಯಲ್ಲಿ ಬಡ್ತಿಯನ್ನು ನೀಡಿ ಸ್ಥಳನಿಯುಕ್ತಿಗೊಳಿಸಲಾಗಿದೆ.

ದಿನಾಂಕ : 17-08-2013 ರಂದು ನಡೆದ ಇಲಾಖಾ ಮುಂಬಡ್ತಿ ಸಭೆಯಲ್ಲಿ ಅರ್ಹರಿರುವ ಉಳಿದ 03 ಅಧಿಕಾರಿಗಳಿಗೆ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸುವ ಸಲುವಾಗಿ ದಿನಾಂಕ : 31-12-2013 ರ ಅಂತ್ಯಕ್ಕೆ,

ಖಾಲಿ ಇರುವ ಹಾಗೂ ದಿನಾಂಕ : 31-03-2014 ರ ಅಂತ್ಯಕ್ಕೆ ನಿವೃತ್ತಿ ಅಥವಾ ಬಡ್ತಿಯಿಂದ ಖಾಲಿಯಾಗಬಹುದಾದಂತಹ ಹುದ್ದೆಗಳಿಗೆ ಕೌನ್ಸಿಲಿಂಗನ್ನು ದಿನಾಂಕ : 30-01-2014 ರಂದು ನಡೆಸಲಾಗಿ, ಸದರಿ ಕೌನ್ಸಿಲಿಂಗ್‌ನಲ್ಲಿ ಅಧಿಕಾರಿಗಳು ಸ್ವತ: ಸ್ಥಳಗಳನ್ನು ಆಯ್ಕೆ ಮಾಡಿಕೊಂಡಿದ್ದರ ಹಿನ್ನೆಲೆಯಲ್ಲಿ ಅವರುಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಬೇಕಾಗಿರುವುದರಿಂದ ಈ ಕೆಳಕಂಡ ಆದೇಶ.

**ಆದೇಶ :-**

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 21600-40050 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು(ಬೋಧಕೇತರ) ಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 22800-43200 ರ ಪತ್ರಾಂಕಿತ ಸಹಾಯಕರ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಅವರುಗಳ ಹೆಸರಿನ ಮುಂದೆ ಸೂಚಿಸಲಾಗಿರುವ ಹುದ್ದೆ ಮತ್ತು ಸ್ಥಳಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶವಾಗುವವರೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಪತ್ರಾಂಕಿತ ವ್ಯವಸ್ಥಾಪಕರ ಹೆಸರು ಹಾಗೂ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ಹೆಸರು ಮತ್ತು ವಿಳಾಸ ಶ್ರೀಮತಿ / ಶ್ರೀ | ಪತ್ರಾಂಕಿತ ಸಹಾಯಕರ ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಹುದ್ದೆ ಮತ್ತು ಕಛೇರಿಯ ವಿಳಾಸ |
|---|---|---|---|
| 1 | 34 | ಬಿ.ಎಂ. ಆನಂದಮೂರ್ತಿ, ಪತ್ರಾಂಕಿತ ವ್ಯವಸ್ಥಾಪಕರು, ಸಹ ನಿರ್ದೇಶಕರ ಕಛೇರಿ, ಸಾ.ಶಿ.ಇ, ಮೈಸೂರು ವಿಭಾಗ, ಮೈಸೂರು | ಪತ್ರಾಂಕಿತ ಸಹಾಯಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು (ಶ್ರೀ ಹೆಚ್.ಜಿ. ಪದ್ಮನಾಭರಾವ್ ಇವರು ದಿನಾಂಕ : 31-01-2014 ರಂದು ನಿವೃತ್ತಿ ಹೊಂದುವುದರಿಂದ ತೆರವಾಗುವ ಹುದ್ದೆಗೆ) |
| 2 | 35 | ಜಿ.ಕೆ. ಪುಟ್ಟರಾಜು, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ | ಪತ್ರಾಂಕಿತ ಸಹಾಯಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಜಿಲ್ಲೆ, ಹಾಸನ ( ಶ್ರೀಮತಿ ಎಂ. ಸರೋಜ ಇವರಿಗೆ ಹಿರಿಯ ಸಹಾಯಕ ನಿರ್ದೇಶಕರು(ಬೋಧಕೇತರ ಹುದ್ದೆಗೆ ಬಡ್ತಿಯನ್ನು ನೀಡಿವುದರಿಂದ ಅಥವಾ ಅವರು ದಿನಾಂಕ : 31-03-2014 ರಂದು ವಯೋನಿವೃತ್ತಿ ಹೊಂದುವುರಿಂದ ತೆರವಾಗುವ ಹುದ್ದೆಗೆ) |
| 3 | 37 | ಎನ್. ಸತ್ಯನಾರಾಯಣ, ಸಹಾಯಕ ನಿರ್ದೇಶಕರು (ಆಡಳಿತ), ಆಯುಕ್ತರ ಕಛೇರಿ, ಸಾ.ಶಿ.ಇ., ಬೆಂಗಳೂರು | ಪತ್ರಾಂಕಿತ ಸಹಾಯಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ( ಶ್ರೀ ಹೆಚ್.ವಿ. ಸಂಜೀವಯ್ಯ ಇವರ ವಯೋನಿವೃತ್ತಿಯಿಂದ ತೆರವಾದ ಹುದ್ದೆಗೆ) |

ಮೇಲ್ಕಂಡ ಅಧಿಕಾರಿಗಳ ಪೈಕಿ ಕ್ರಮ ಸಂಖ್ಯೆ : 02 ರಲ್ಲಿನ ಶ್ರೀ ಪುಟ್ಟರಾಜು ರವರು ಶ್ರೀಮತಿ ಎಂ. ಸರೋಜ, ಪತ್ರಾಂಕಿತ ಸಹಾಯಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ

ಜಿಲ್ಲೆ, ಹಾಸನ ರವರ ಬಡ್ತಿಯಿಂದ ಅಥವಾ ನಿವೃತ್ತಿಯಿಂದ ತೆರವಾಗುವ ಹುದ್ದೆಯನ್ನು ಮಾಡಿಕೊಂಡು, ಸದರಿ ಹುದ್ದೆಯು ತೆರವಾದ ನಂತರ ಕರ್ತವ್ಯಕ್ಕೆ ಹಾಜರಾಗಲು ಲಿಖಿತ ಒಪ್ಪಿಗೆಯನ್ನು ಸೂಚಿಸಿರುವ ಮೇರೆಗೆ ಅವರಿಗೆ ಸದರಿ ಸ್ಥಳದಲ್ಲಿ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಲಾಗಿದೆ. ಶ್ರೀ ಪುಟ್ಟರಾಜು ರವರು ಈ ಕಛೇರಿಯಿಂದ ಬಿಡುಗಡೆ ಹೊಂದಲು ಲಿಖಿತ ಸೂಚನೆ ನೀಡಿದ ನಂತರ ಅವರು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದಿಂದ ಬಿಡುಗಡೆಯಾಗುವುದು.

ಸ್ಥಾನಪನ್ನ ಬಡ್ತಿಯನ್ನು ಹೊಂದಿದ ಉಳಿದ ಅಧಿಕಾರಿಗಳು ಈ ಆದೇಶ ಜಾರಿಯಾದ 15 ದಿನಗಳ ಒಳಗಾಗಿ ಅವರುಗಳು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯಿಂದ ಬಿಡುಗಡೆಯಾಗಿ, ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗಲು ಈ ಮೂಲಕ ಆದೇಶಿಸಲಾಗಿದೆ.

(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

(ಎಸ್.ಎಂ. ಶಾಂತರಾಜು)
ಅಪರ ಆಯುಕ್ತರು(ಆಡಳಿತ)(ಹೆ.ಪ್ರ)
3/01/17

ಇವರಿಗೆ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು. ರವರಿಗೆ ಮಾಹಿತಿಗಾಗಿ.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.
3) ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
4) ಸಂಬಂಧಿಸಿದ ಕಛೇರಿ ಮುಖ್ಯಸ್ಥರಿಗೆ.
5) ಸಂಬಂಧಿಸಿದ ಅಧಿಕಾರಿಗಳಿಗೆ
6) ಕಛೇರಿ ಪ್ರತಿ.